# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1381

ವಿಧಾನ ಪರಿಷತ್ತು ಸದಸ್ಯರ ಹೆಸರು : ಶ್ರೀ ಎಂ. ನಾರಾಯಣಸ್ವಾಮಿ

ಉತ್ತರಿಸಬೇಕಾದ ದಿನಾಂಕ : 16.03.2021

ಉತ್ತರಿಸುವ ಸಚಿವರು : ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು.

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>2020-21ನೇ ಸಾಲಿನಲ್ಲಿ ಬೆಂಗಳೂರು ನಗರ ಜಿಲ್ಲೆಯಿಂದ ಹೊಸ ಪಡಿತರ ಚೀಟಿಗಾಗಿ ಸ್ವೀಕೃತವಾಗಿರುವ ಅರ್ಜಿಗಳೆಷ್ಟು ಹಾಗೂ ಬಿ.ಪಿ.ಎಲ್ ಮತ್ತು ಎ.ಪಿ.ಎಲ್ ಪಡಿತರ ಚೀಟಿಗಳೆಷ್ಟು; (ವಿವರವನ್ನು ನೀಡುವುದು)</td><td>2020-21ನೇ ಸಾಲಿನಲ್ಲಿ ಬೆಂಗಳೂರು ನಗರ ಜಿಲ್ಲೆಯಲ್ಲಿ 6113 ಆದ್ಯತಾ ಪಡಿತರ ಚೀಟಿಗಳಿಗೆ ಹಾಗೂ 1209 ಆದ್ಯತೇತರ ಪಡಿತರ ಚೀಟಿಗಳನ್ನು ಕೋರಿ ಅರ್ಜಿಗಳು ಸ್ವೀಕೃತವಾಗಿರುತ್ತವೆ. ಬೆಂಗಳೂರು ನಗರ ಜಿಲ್ಲೆಯಲ್ಲಿ ಈ ಕೆಳಕಂಡಂತೆ ಆದ್ಯತಾ/ಆದ್ಯತೇತರ ಪಡಿತರ ಚೀಟಿಗಳು ಚಾಲ್ತಿಯಲ್ಲಿರುತ್ತವೆ.<br><table><tr><th>ಅಂತ್ಯೋದಯ ಅನ್ನ ಪಡಿತರ ಚೀಟಿಗಳು</th><th>ಆದ್ಯತಾ ಪಡಿತರ ಚೀಟಿಗಳು</th><th>ಆದ್ಯತೇತರ ಪಡಿತರ ಚೀಟಿಗಳು</th><th>ಒಟ್ಟು</th></tr><tr><td>13053</td><td>500279</td><td>78663</td><td>591995</td></tr></table></td></tr>
<tr><td>ಆ</td><td>2020-21ನೇ ಸಾಲಿನಲ್ಲಿ ಬೆಂಗಳೂರು ನಗರ ಜಿಲ್ಲೆಯ ವ್ಯಾಪ್ತಿಯಲ್ಲಿ ವಿತರಿಸಲಾಗಿರುವ ಪಡಿತರ ಚೀಟಿಗಳೆಷ್ಟು; ಹಾಗೂ ಉಳಿದ ಪಡಿತರ ಚೀಟಿಗಳ ಅರ್ಜಿಗಳನ್ನು ಎಷ್ಟು ಕಾಲಮಿತಿಯೊಳಗೆ ವಿತರಿಸಲಾಗುವುದು; (ಬಿಪಿಎಲ್ ಮತ್ತು ಎಪಿಎಲ್ ಪಡಿತರ ಚೀಟಿಗಳ ವಿವರವನ್ನು ನೀಡುವುದು)</td><td>2020-21ನೇ ಸಾಲಿನಲ್ಲಿ ಬೆಂಗಳೂರು ನಗರ ಜಿಲ್ಲೆಯಲ್ಲಿ ಒಟ್ಟು 53 ಆದ್ಯತೇತರ ಪಡಿತರ ಚೀಟಿಗಳನ್ನು ವಿತರಣೆ ಮಾಡಲಾಗಿರುತ್ತದೆ. ಪ್ರಸ್ತುತ ಆದ್ಯತಾ (ಬಿಪಿಎಲ್) ಪಡಿತರ ಚೀಟಿಗಳ ವಿತರಣೆಯನ್ನು ತಾತ್ಕಾಲಿಕವಾಗಿ ತಡೆಹಿಡಿಯಲಾಗಿರುತ್ತದೆ. ಆದ್ಯತೇತರ (ಎಪಿಎಲ್) ಪಡಿತರ ಚೀಟಿಗಳ ವಿತರಣೆ ಚಾಲ್ತಿಯಲ್ಲಿರುತ್ತದೆ.</td></tr>
<tr><td>ಇ</td><td>ಬಿ.ಪಿ.ಎಲ್ ಕಾರ್ಡ್ ಪಡೆಯಲು ಸರ್ಕಾರ ವಿಧಿಸುತ್ತಿರುವ ಅರ್ಹತೆಗಳು ಹಾಗೂ ಮಾನದಂಡಗಳೇನು</td><td>ಸರ್ಕಾರವು 16-08-2016, 25-03-2017 ಹಾಗೂ 20-5-2017 ರ ಆದೇಶದಲ್ಲಿ ಬಿಪಿಎಲ್ ವರ್ಗಕ್ಕೆ ಒಳಪಡದ (Exclusion Criteria) 04 ಮಾನದಂಡಗಳನ್ನು ಗುರುತಿಸಿ ಆದೇಶಿಸಿರುತ್ತದೆ. ಕೆಳಗಿನ ಈ 04 ಮಾನದಂಡಗಳಿಗೆ</td></tr>
</table>

| | | |
|---|---|---|
| | | ಒಳಪಡದವರು ಬಿಪಿಎಲ್ ಪಡಿತರ ಚೀಟಿ ಪಡೆಯಲು ಅರ್ಹರಿರುತ್ತಾರೆ.<br>1)ವೇತನವನ್ನು ಗಣನೆಗೆ ತೆಗೆದುಕೊಳ್ಳದೆ ಎಲ್ಲಾ ಖಾಯಂ ನೌಕರರು ಅಂದರೆ, ಸರ್ಕಾರದ ಅಥವಾ ಸರ್ಕಾರದಿಂದ ಅನುದಾನವನ್ನು ಪಡೆಯುತ್ತಿರುವ ಸಂಸ್ಥೆಗಳು ಅಥವಾ ಸರ್ಕಾರಿ ಪ್ರಾಯೋಜಿತ, ಸರ್ಕಾರಿ ಸ್ವಾಮ್ಯದಸಂಸ್ಥೆಗಳು/ಮಂಡಳಿಗಳು /ನಿಗಮಗಳು/ಸ್ವಾಯತ್ತ ಸಂಸ್ಥೆಗಳೂ ಇತ್ಯಾದಿ: ಒಳಗೊಂಡಂತೆ ಆದಾಯ ತೆರಿಗೆ/ಸೇವಾ ತೆರಿಗೆ/ವ್ಯಾಟ್/ವೃತಿ ತೆರಿಗೆ ಪಾವತಿಸುವ ಎಲ್ಲಾ ಕುಟುಂಬಗಳು.<br>2. ಗ್ರಾಮೀಣ ಪ್ರದೇಶದಲ್ಲಿ 3 ಹೆಕ್ಟೇರ್ ಒಣಭೂಮಿ ಅಥವಾ ತತ್ಸಮಾನ ನೀರಾವರಿ ಭೂಮಿ ಹೊಂದಿರುವ ಕುಟುಂಬಗಳು ಅಥವಾ ಗ್ರಾಮೀಣ ಪ್ರದೇಶವನ್ನು ಹೊರತುಪಡಿಸಿ ನಗರ ಪ್ರದೇಶಗಳಲ್ಲಿ 1000 ಚದರ ಅಡಿಗಿಂತಲೂ ಹೆಚ್ಚಿನ ವಿಸ್ತೀರ್ಣದ ಪಕ್ಕಾ ಮನೆಯನ್ನು ಸ್ವಂತವಾಗಿ ಹೊಂದಿರುವ ಕುಟುಂಬಗಳು.<br>3. ಜೀವನೋಪಾಯಕ್ಕಾಗಿ ಸ್ವತಃ ಓಡಿಸುವ ಒಂದು ವಾಣಿಜ್ಯ ವಾಹನವನ್ನು ಅಂದರೆ ಟ್ರಾಕ್ಟರ್, ಮ್ಯಾಕ್ಸಿಕ್ಯಾಭ್ ಟ್ಯಾಕ್ಸಿ ಇತ್ಯಾದಿಗಳನ್ನು ಹೊಂದಿದ ಕುಟುಂಬವನ್ನು ಹೊರತುಪಡಿಸಿ, ನಾಲ್ಕು ಚಕ್ರದ ವಾಹನಗಳನ್ನು ಹೊಂದಿರುವ ಎಲ್ಲಾ ಕುಟುಂಬಗಳು.<br>4. ಕುಟುಂಬದ ವಾರ್ಷಿಕ ಆದಾಯವು ರೂ.1.20 ಲಕ್ಷಗಳಿಗಿಂತ ಹೆಚ್ಚು ಇರುವ ಕುಟುಂಬಗಳು. |

ಆನಾಸ 103 ಡಿಆರ್ಎ 2021(ಇ-ಆಫೀಸ್)

(ಉಮೇಶ ವಿ. ಕತ್ತಿ)
ಆಹಾರ, ನಾಗರಿಕ ಸರಬರಾಜು ಮತ್ತು
ಗ್ರಾಹಕರ ವ್ಯವಹಾರಗಳ ಹಾಗೂ
ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು.